ಸರಬರಾಜು ಮಾಡಲು ಅನುಕೂಲವಾಗುವಂತೆ ಒಟ್ಟು 6 ಗಂಟೆಗಳ ಕಾಲ ಪ್ರತಿ ದಿನ 3 ಫೇಸ್ ವಿದ್ಯುತ್ ಸರಬರಾಜು ನೀಡಲಾಗುತ್ತಿದೆ.

ಇ. ಈಗಿನ ವಿದ್ಯುತ್ ಅಭಾವದ ಪರಿಸ್ಥಿತಿಯಲ್ಲಿ ದಿನದ 24 ಗಂಟೆಗಳಿಗೂ ನಿರಂತರವಾಗಿ ವಿದ್ಯುತ್ ಸರಬರಾಜು ಮಾಡಲು ಸಾಧ್ಯವಾಗುತ್ತಿಲ್ಲ.

ಪಿರಿಯಾಪಟ್ಟಣ ಕರಡಿಲಕ್ಕನ ಏತ ನೀರಾವರಿ ಯೋಜನೆಗೆ ವಿದ್ಯುತ್ ಸೌಲಭ್ಯ

1858 (2276) ಶ್ರೀ ಬಸವರಾಜು ಹೆಚ್.ಸಿ (ಪಿರಿಯಾಪಟ್ಟಣ): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಪಿರಿಯಾಪಟ್ಟಣ ಕರಡಿಲಕ್ಕನ ಕೆರೆ ಏತ ನೀರಾವರಿ ಯೋಜನೆಗೆ ವಿದ್ಯುತ್ ಸೌಲಭ್ಯ ನೀಡಲು ನಿರ್ಮಿಸಲಾಗುತ್ತಿರುವ ಸಬ್ ಸ್ಟೇಷನ್ ಕಾಮಗಾರಿ ಯಾವ ದಂತದಲ್ಲಿದೆ;

ಆ. ರಾಮನಾಥಪುರ ಹಾಗೂ ಕುಶಾಲನಗರ ಕಡೆಯಿಂದ ತಂತಿ ಎಳೆಯಲು ಅರಣ್ಯ ಇಲಾಖೆಯಿಂದ ಅಡಚಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ. ಬಂದಿದ್ದಲ್ಲಿ, ಅಡಚಣೆ ನಿವಾರಣೆಗೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ.

ಈ. ಜೂನ್ ತಿಂಗಳಲ್ಲಿ ರೈತರಿಗೆ ನೀರು ಒದಗಿಸಬೇಕಾಗಿದ್ದು ಮೇ ತಿಂಗಳ ಹೊತ್ತಿಗೆ ವಿದ್ಯುತ್ ಸೌಲಭ್ಯ ಒದಗಿಸಲು ಏನು ಕ್ರಮ ತೆಗೆದುಕೊಳ್ಳಲಾಗಿದೆ?

ಶ್ರೀ ಬಸವರಾಜಪಾಟೀಲ್ (ಇಂಧನ ರಾಜ್ಯ ಸಚಿವರು)

ಅ. ಪಿರಿಯಾಪಟ್ಟಣ ಕರಡಿಲಕ್ಕನ ಕೆರೆ ಏತ ನೀರಾವರಿ ಯೋಜನೆಗೆ ವಿದ್ಯುತ್ ಸೌಲಭ್ಯ ಕಲ್ಪಿಸುವ ಸಬ್ ಸ್ಟೇಷನ್‌ನ ಕಾಮಗಾರಿಯನ್ನು ನೀರಾವರಿ ಇಲಾಖೆಯು ಕೈಗೊಂಡಿರುತ್ತದೆ. ಆದುದರಿಂದ ನಿರ್ಮಾಣ ಕಾರ್ಯದ ಪ್ರಗತಿಯ ಬಗ್ಗೆ ನೀರಾವರಿ ಇಲಾಖೆಯು ಮಾಹಿತಿಗಳನ್ನು ಒದಗಿಸಬೇಕಾಗಿರುತ್ತದೆ.

ಆ. ಹೌದು

ಇ. ರಾಮನಾಥಪುರ ಹಾಗೂ ಕುಶಾಲನಗರ ಕಡೆಯಿಂದ ವಿದ್ಯುತ್ ಪ್ರಸರಣ ಮಾರ್ಗವನ್ನು ಚೆನ್ನಿಕಲ್ ಕಾವಲ್ ಮತ್ತು ಗೊಬ್ಲಿ ಅರಣ್ಯ ಪ್ರದೇಶಗಳ ಮುಖಾಂತರ ಎಳೆಯಬೇಕಾಗಿರುತ್ತದೆ. ಚೆನ್ನಿಕಲ್ ಕಾವಲ್ ಅರಣ್ಯ ಪ್ರದೇಶದಲ್ಲಿ ವಿದ್ಯುತ್ ಪ್ರಸರಣ ಮಾರ್ಗವನ್ನು ನಿರ್ಮಿಸಲು ಅರಣ್ಯ ಇಲಾಖೆಗೆ ಹಣವನ್ನು ಈಗಾಗಲೇ ಪಾವತಿಸಲಾಗಿದ್ದು, ಅರಣ್ಯ ಇಲಾಖೆಯ ಅನುಮೋದನೆಯನ್ನು ನಿರೀಕ್ಷಿಸಲಾಗಿದೆ. ಗೊಬ್ಲಿ ಅರಣ್ಯ ಪ್ರದೇಶದಲ್ಲಿ ವಿದ್ಯುತ್ ಪ್ರಸರಣ ಮಾರ್ಗವನ್ನು ನಿರ್ಮಿಸಲು ಪಾವತಿಸಬೇಕಾದ ಹಣದ ಬಗ್ಗೆ ಈಗಾಗಲೇ ಅರಣ್ಯ ಇಲಾಖೆಯನ್ನು ಸಂಪರ್ಕಿಸಲಾಗಿದೆ ಅರಣ್ಯ ಇಲಾಖೆಯು ತಿಳಿಸುವ ಹಣವನ್ನು ಪಾವತಿಸಲು ಕ್ರಮಕೈಗೊಳ್ಳಲಾಗುವುದು.

ಈ. ಅರಣ್ಯ ಪ್ರದೇಶಗಳಲ್ಲಿ ವಿದ್ಯುತ್ ಪ್ರಸರಣ ಮಾರ್ಗವನ್ನು ನಿರ್ಮಿಸಲು ಅರಣ್ಯ ಇಲಾಖೆಯ ಅನುಮೋದನೆಯು ಅವಶ್ಯಕವಾಗಿರುತ್ತದೆ. ಈ ಅನುಮೋದನೆಯನ್ನು ಪಡೆಯಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು. ಅನುಮೋದನೆ ದೊರೆತ ಕೂಡಲೇ ವಿದ್ಯುತ್ ಪ್ರಸರಣ ಮಾರ್ಗ ನಿರ್ಮಾಣ ಕಾರ್ಯವನ್ನು ಕೈಗೊಂಡು ಆದಷ್ಟು ಜಾಗ್ರತೆ ಪೂರ್ಣಗೊಳಿಸಲಾಗುವುದು.